**ದಿನಾಂಕ: 29.06.2024**

## ಟಿಪ್ಪಣಿ

ದಿನಾಂಕ: 25.02.2024 ರಂದು ನಡೆದ ಪೊಲೀಸ್ ಕಾನ್ಸ್‌ಟೇಬಲ್ (ಸಿವಿಲ್) ಎನ್‌ಕೆಕೆ-1137 ಹುದ್ದೆಗಳ ನೇಮಕಾತಿ ಸಂಬಂಧ ನಡೆಸಲಾದ ಲಿಖಿತ ಪರೀಕ್ಷೆಯಲ್ಲಿ ಹಾಜರಾದ ಎಲ್ಲಾ ಅಭ್ಯರ್ಥಿಗಳ ಅಂಕಪಟ್ಟಿಯನ್ನು ಮತ್ತು ಅನರ್ಹಗೊಂಡ ಅಭ್ಯರ್ಥಿಗಳ ಪಟ್ಟಿಯನ್ನು ದಿನಾಂಕ: 10.06.2024 ರಂದು ಪೊಲೀಸ್ ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದ್ದು, ಸದರಿ ಅಂಕಪಟ್ಟಿಗೆ ಹಾಗೂ ಅನರ್ಹಗೊಂಡ ಅಭ್ಯರ್ಥಿಗಳ ಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ತಿಳಿಸಲಾದ ಇ-ಮೇಲ್ ಮೂಲಕ ದಿನಾಂಕ: 15.06.2024ರ ಸಂಜೆ 05:00 ರ ವರೆಗೂ ಸಲ್ಲಿಸಲು ಅಭ್ಯರ್ಥಿಗಳಿಗೆ ಅವಕಾಶವನ್ನು ನೀಡಲಾಗಿತ್ತು.

ಅದರನ್ವಯ ಅಭ್ಯರ್ಥಿಗಳಿಂದ ಸ್ವೀಕೃತಗೊಂಡ ಆಕ್ಷೇಪಣೆಗಳನ್ನು ಪರಿಶೀಲಿಸಿ, ಸೂಕ್ತ ಕ್ರಮಕೈಗೊಂಡು, ಪರಿಷ್ಕೃತ ಅಂಕಪಟ್ಟಿ ಮತ್ತು 1:5 ಅನುಪಾತದ ಆಯ್ಕೆ ಪಟ್ಟಿಯನ್ನು ಪೊಲೀಸ್ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಹಾಗೂ ಶೀಘ್ರದಲ್ಲಿಯೇ (ಸಿ.ಪಿ.ಸಿ-ಎನ್‌ಕೆಕೆ-1137) ಹುದ್ದೆಗಳ ನೇಮಕಾತಿಗಾಗಿ ಅಧಿಸೂಚಿಸಲ್ಪಟ್ಟ ಘಟಕಗಳಿಂದ ದೈಹಿಕ ಪರೀಕ್ಷೆಗಳನ್ನು ನಡೆಸಲಾಗುವುದು.

**ಸಹಿ/-**

ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು,
ನೇಮಕಾತಿ, ಬೆಂಗಳೂರು.